ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ನೀರು ಪೂರೈಕೆ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು.- ಪ್ರಸ್ತಾವ ಏನೆಂದರೆ;

"ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ನೀರು ಪೂರೈಕೆ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಲ್ಪಟ್ಟಿತು ಮತ್ತು ಮಸೂದೆಯ ಬಗ್ಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು:- ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ಅಂಗೀಕೃತವಾಗಿರುವ ಇನ್ನು ಒಂದು ಬಿಲ್ ಇದೆ. ಅದನ್ನು ನಾವು ಪಾಸ್ ಮಾಡಬೇಕು. ಏಕೆಂದರೆ ಬಿಲ್ ಪಾಸ್ ಮಾಡದಿದ್ದರೆ ನಮ್ಮ ಸಭೆಗೆ ಅಗೌರವ ತಂದಂತಾಗುತ್ತದೆ. ಆದಕಾರಣ ಆ ಬಿಲ್‌ನ್ನು ಪಾಸ್ ಮಾಡಿಬಿಡೋಣ.

3.50 ಪಿಎಂ

(v) ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕ 2003

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ಬಿ. ಚಂದ್ರೇಗೌಡ (ಕಂದಾಯ ಸಚಿವರ ಪರವಾಗಿ).- ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ;"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು):- ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ;

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು:- ಈಗ ನಾನು ಎಂಎಲ್ಎಗಳು ಫಾರಿನ್ಗೆ ಹೋಗುವ ವಿಚಾರಕ್ಕೆ ಸಂಬಂಧಪಟ್ಟ ಹಾಗೆ ಒಂದು ರೂಲಿಂಗ್ ಕೊಡುತ್ತೇನೆ.

4) ಸಭಾಧ್ಯಕ್ಷರ ತೀರ್ಪು

ವಿಷಯ:- ಶಾಸಕರು ವಿದೇಶ ಪ್ರವಾಸ ಕೈಗೊಂಡಿದ್ದಾರೆಂಬ ಹೇಳಿಕೆಗೆ ಸಂಬಂಧಪಟ್ಟಂತೆ ಹಕ್ಕು ಬಾಧ್ಯತಾ ಸಮಿತಿಗೆ ಒಪ್ಪಿಸುವ ಬಗ್ಗೆ

ದಿನಾಂಕ 24-03-2003 ರಂದು ವಿಧಾನ ಸಭಾ ಸದಸ್ಯರಾದ ಶ್ರೀಯುತರುಗಳಾದ ಕೆ.ಬಿ. ಮಲ್ಲಿಕಾರ್ಜುನ, ಕೆ. ಜಯಪ್ರಕಾಶ್ ಹೆಗ್ಡೆ, ಮಹದೇವ ಪ್ರಸಾದ್ ಹಾಗೂ ಎ.ಬಿ. ಪಾಟೀಲ್ ರವರುಗಳು ಹಕ್ಕುಚ್ಯುತಿ ಸೂಚನೆ ಸಲ್ಲಿಸಿ ಶಾಸಕರು ಬರಗಾಲದಲ್ಲಿ ವಿದೇಶ ಪ್ರವಾಸ ಮಾಡಿದ್ದಾರೆಂದು ಆಪಾದಿಸಿ ಬೆಂಗಳೂರಿನ ಹಿರಿಯ ನಾಗರೀಕರಾದ ಶ್ರೀ ಬಿ. ಕೃಷ್ಣಭಟ್ ರವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿಯ ಮೊಕದ್ದಮೆಯಲ್ಲಿ, ಮೊದಲ ಹಂತದಲ್ಲಿ ನೀಡಿದ ತಡೆಯಾಜ್ಞೆಯಿಂದ ಹಾಗೂ ಆ ಮೂಲಕ (ಪತ್ರಿಕಾ ವರದಿಗಳಿಂದ) ಉಂಟಾದ ಗೊಂದಲದಿಂದ ಶಾಸಕರ ಗೌರವ ಮತ್ತು ಹಕ್ಕಿಗೆ ಚ್ಯುತಿಯುಂಟಾಗಿದೆಯೆಂದು, ಈ ಬಗ್ಗೆ ಸದನದಲ್ಲಿ ನಿಯಮ 191ರಡಿಯಲ್ಲಿ ಚರ್ಚಿಸಲು ಅನುಮತಿ ಕೋರಿದ್ದರಿಂದ ಪೂರ್ವಭಾವಿ ಚರ್ಚೆಗೆ ಅವಕಾಶ ನೀಡಲಾಯಿತು.

ಈ ಸದನದ ಸದಸ್ಯರು ಸರ್ಕಾರದ ವೆಚ್ಚದಲ್ಲಿ, (ರಿಟ್ ಅರ್ಜಿಯಲ್ಲಿ ನಮೂದಿಸಿರುವಂತೆ) ಯಾವುದೇ ವಿದೇಶ ಯಾತ್ರೆ ಕೈಕೊಂಡಿರುವುದಿಲ್ಲ ಹಾಗೂ ವಿದೇಶ ಯಾತ್ರೆಗೆ ಸರ್ಕಾರದಿಂದಾಗಲಿ, ವಿಧಾನ ಮಂಡಲದಿಂದಾಗಲಿ ಯಾವುದೇ ಆದೇಶ ಹೊರಡಿಸಿಲ್ಲ. ಇದು ದುರುದ್ದೇಶದಿಂದ, ಕೇವಲ ಅಗ್ಗದ ಪ್ರಚಾರ ಪಡೆಯಲು ಮತ್ತು ಈ ಸದನದ, ಸದಸ್ಯರ ಗೌರವ, ಘನತೆ ಮತ್ತು ಕಾರ್ಯವೈಖರಿಗೆ ಧಕ್ಕೆ, ಕಳಂಕ ತರುವ ಏಕೈಕ ಉದ್ದೇಶದಿಂದ ಸತ್ಯಕ್ಕೆ ದೂರವಾದ ವಿಚಾರದ ಬಗ್ಗೆ ರಿಟ್ ಅರ್ಜಿಯನ್ನು ಸಲ್ಲಿಸಿ, ಶ್ರೀ ಬಿ. ಕೃಷ್ಣಭಟ್ ರವರು ಹಕ್ಕುಚ್ಯುತಿ ಮಾಡಿದ್ದಾರೆಂದು ಮಂಡಿಸಿರುವ ಸದಸ್ಯರ ಅಭಿಪ್ರಾಯವಾಗಿದೆ.